# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಶನಿವಾರ, ೦೩, ಜನವರಿ, ೨೦೨೬ (ಪುಷ್ಯ, ೧೩, ಶಕವರ್ಷ, ೧೯೪೭)<br>BENGALURU, SATURDAY, 03, JANUARY, 2026 (PUSHYA , 13, SHAKAVARSHA, 1947) | ನಂ. ೦೪<br>No. 04 |
|---|---|---|

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿಜಯಪುರ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ GIS ಆಧಾರಿತ ಮಹಾಯೋಜನೆ (ಪ-III)2041ಕ್ಕೆ ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 29 ಬೆಮಪ್ರಾ 2022, ಬೆಂಗಳೂರು, ದಿನಾಂಕ:26.04.2022.
2. ಆಯುಕ್ತರು, ವಿಜಯಪುರ ನಗರಾಭಿವೃದ್ದಿ ಪ್ರಾಧಿಕಾರ, ವಿಜಯಪುರ ಇವರ ಕಛೇರಿ ಪತ್ರ ಸಂಖ್ಯೆ:ನಪ್ರಾವಿ/GIS/ಮಯೋ/2020-21/1022 ದಿನಾಂಕ:22.08.2025
3. ಆಯುಕ್ತರು, ನಗರಾಭಿವೃದ್ದಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ರವರ ಏಕ ಕಡತ ಸಂಖ್ಯೆ: DTCP-4-MPF-2017-18 ದಿನಾಂಕ:16.10.2025.

******

**ಪ್ರಸ್ತಾವನೆ**:

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ವಿಜಯಪುರ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ- II) ಗೆ ಸರ್ಕಾರದ ಅಂತಿಮ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಆಯುಕ್ತರು ವಿಜಯಪುರ ನಗರಾಭಿವೃದ್ದಿ ಪ್ರಾಧಿಕಾರವರು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 9 ರಿಂದ 12 ರನ್ವಯ ವಿಜಯಪುರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ GIS ಆಧಾರಿತ ಮಹಾಯೋಜನೆ (ಪ-III) (ತಾತ್ಕಾಲಿಕ) ಯನ್ನು ಸಿದ್ದಪಡಿಸಿ ಸದರಿ ಕಾಯ್ದೆಯ ಕಲಂ 13(1) ರನ್ವಯ ಸರ್ಕಾರದ ತಾತ್ಕಾಲಿಕ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ಏಕ ಕಡತದಲ್ಲಿ ಆಯುಕ್ತರು, ನಗರಾಭಿವೃದ್ದಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ರವರ ವರದಿಯಂತೆ ವಿಜಯಪುರ ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯು 2011ರಲ್ಲಿ 3,87,935 ಇದ್ದು 2041ನೇ ಇಸವಿಗೆ ಜನ ಸಂಖ್ಯೆಯು ಸುಮಾರು 8,65,000 ಆಗಬಹುದೆಂದು ಅಂದಾಜಿಸಿ ಮಹಾಯೋಜನೆಯನ್ನು

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ತಯಾರಿಸಲಾಗಿದೆ. ವಿಜಯಪುರ ಸ್ಥಳೀಯ ಯೋಜನಾ ಪ್ರದೇಶವು ಒಟ್ಟು 52500.00 ಹೆಕ್ಟೇರ್, ವಿಸ್ತೀರ್ಣ ಇರುತ್ತದೆ. ಸದರಿ ವಿಸ್ತೀರ್ಣದಲ್ಲಿ 15591.30 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ವಿಜಯಪುರ ಪಟ್ಟಣದ ಜನ ಸಂಖ್ಯೆ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ರಸ್ತೆಗಳ ಹಾಲಿ ಪರಿಚಲನೆ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿಗುನುಗುಣವಾಗಿ ಮಹಾಯೋಜನೆ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಯೋಜಿತ ಬೆಳವಣಿಗೆಗೆ ವಿವಿಧ ಉಪಯೋಗಗಳಿಗೆ ಬೇಕಾಗಬಹುದಾದ ಭೂಮಿಯನ್ನು ಈ ಕೆಳಗಿನಂತೆ ಕಾಯ್ದಿರಿಸಿ ಮಹಾಯೋಜನೆ ತಯಾರಿಸಲಾಗಿದೆ.

ಪಟ್ಟಣದ ಯೋಜಿತ ಬೆಳವಣಿಗೆಗಾಗಿ ನಗರೀಕರಣ ಎಲ್ಲೆ ಎಂದು ಪ್ರಸ್ತಾಪಿಸಿರುವ 15591.30 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 7237.69 ಹೆಕ್ಟೇರ್(ಶೇ:46.42), ವಾಣಿಜ್ಯಕ್ಕಾಗಿ 868.82 ಹೆಕ್ಟೇರ್(ಶೇ:5.57), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ 1715.46 ಹೆಕ್ಟೇರ್ (ಶೇ:11.00) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 2021.09 ಹೆಕ್ಟೇರ್ (ಶೇ:12.96) ಕೈಗಾರಿಕೆಗಾಗಿ 549.70 ಹೆಕ್ಟೇರ್(ಶೇ:3.53), ಸಾರ್ವಜನಿಕ ಉಪಯುಕ್ತಗಾಗಿ 111.71 ಹೆಕ್ಟೇರ್(ಶೇ:0.72), ಸಾರಿಗೆ/ಸಂಪರ್ಕ ವಲಯಕ್ಕೆ 3009.96 ಹೆಕ್ಟೇರ್ (ಶೇ19.31) ಹಾರೂ ಪಾರಂಪರೀಕ ಪ್ರದೇಶಕ್ಕಾಗಿ 76.87 ಹೆಕ್ಟರ್ (ಶೇ:0.49) ಪ್ರದೇಶವನ್ನು ಮೀಸಲಿಟ್ಟು ಭೂ ಉಪಯೋಗವನ್ನು ನಿಗಧಿಪಡಿಸಲಾಗಿದೆ.

ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರನ್ವಯ ತಾತ್ಕಾಲಿಕ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 335 ಬೆಮಪ್ರಾ 2025(ಇ-ಕಡತ)**
**ಬೆಂಗಳೂರು, ದಿನಾಂಕ:02.01.2026**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ವಿಜಯಪುರ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ GIS ಆಧಾರಿತ ಮಹಾಯೋಜನೆ (ಪ-III)2041 ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರನ್ವಯ ಸರ್ಕಾರದ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

ವಿಜಯಪುರ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-III)2041ಕ್ಕೆ ತಾತ್ಕಾಲಿಕ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(**ಲತಾ.ಕೆ**)
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ),
ನಗರಾಭಿವೃದ್ಧಿ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH